ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

ವಿಷಯ:– ಕೋವಿಡ್–19 2ನೇ ಅಲೆ ತೀವ್ರವಾಗಿದ್ದು, ಸಾರ್ವಜನಿಕ ವೈದ್ಯ ಸಂಸ್ಥೆಯಿಂದ ಉಲ್ಲೇಖಿಸಲಾಗುವ ಸೋಂಕಿತರುಗಳ ಚಿಕಿತ್ಸೆಗಾಗಿ ಶೇ.50% ರಷ್ಟು ಹಾಸಿಗೆಗಳನ್ನು ಕಡ್ಡಾಯವಾಗಿ ಕಾಯ್ದಿರಿಸುವ ಬಗ್ಗೆ

ಉಲ್ಲೇಖ:– ಸರ್ಕಾರದ ಅಧಿಸೂಚನೆ ಸಂಖ್ಯೆ ಹೆಚ್‌ಎಫ್‌ಡಬ್ಲ್ಯೂ 228 ಎಸಿಎಫ್ 2020, ದಿನಾಂಕ:23–6–2020.

----

ಪ್ರಸ್ತಾವನೆ:–

ಕೋವಿಡ್–19 2ನೇ ಅಲೆಯು ತೀವ್ರಗತಿಯಲ್ಲಿದ್ದು, ಜಿಲ್ಲೆಯಲ್ಲಿ ಸೋಂಕು ದಿನೇ ದಿನೇ ವ್ಯಾಪಕವಾಗಿ ಹರಡುತ್ತಿದ್ದು, ಸೋಂಕಿತರುಗಳ ಸಂಖ್ಯೆ ಹೆಚ್ಚಾಗುತ್ತಿರುತ್ತದೆ. ಸಾರ್ವಜನಿಕ ವೈದ್ಯ ಸಂಸ್ಥೆಯಿಂದ ಚಿಕಿತ್ಸೆಗಾಗಿ ಉಲ್ಲೇಖಿಸಲಾಗುವ ಪ್ರಕರಣಗಳಲ್ಲಿನ ಸೋಂಕಿತರ ಚಿಕಿತ್ಸೆಗಾಗಿ ಕೆ.ಪಿ.ಎಂ.ಇ ಅಡಿ ನೋಂದಾಯಿತ ಆಸ್ಪತ್ರೆಗಳಲ್ಲಿ ಶೇ.50% ರಷ್ಟು ಹಾಸಿಗೆಗಳನ್ನು ಕಾಯ್ದಿರಿಸಲು ಹಾಗೂ ವೈದ್ಯಕೀಯ ಚಿಕಿತ್ಸೆಗಾಗಿ ವೆಚ್ಚದ ಪ್ಯಾಕೇಜ್‌ಗಳನ್ನು ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಸ್ಪಷ್ಟಪಡಿಸಲಾಗಿರುತ್ತದೆ.

ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಸಾರ್ವಜನಿಕ ವೈದ್ಯ ಸಂಸ್ಥೆಯಿಂದ ಚಿಕಿತ್ಸೆಗಾಗಿ ಉಲ್ಲೇಖಿಸಲಾಗುವ ಪ್ರಕರಣಗಳಲ್ಲಿನ ಸೋಂಕಿತರ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಶೇ.50% ರಷ್ಟು ಹಾಸಿಗೆಗಳನ್ನು ಕಡ್ಡಾಯವಾಗಿ ಕಾಯ್ದಿರಿಸಲು ಸೂಚಿಸುವುದು ಸೂಕ್ತವಾಗಿರುವುದರಿಂದ ಈ ಕೆಳಕಂಡಂತೆ ಆದೇಶ.

## ::ಆದೇಶ::

ಸಂಖ್ಯೆ:ವಿಪತ್ತು ನಿರ್ವಹಣೆ:ಕೋವಿಡ್–19:ಸಿಆರ್–1/2021–22

ದಿನಾಂಕ:10–05–2021

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವಂತೆ ಶ್ರೀಮತಿ ಕವಿತಾ ಎಸ್.ಮನ್ನಿಕೇರಿ, ಭಾ.ಆ.ಸೇ, ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಚಿತ್ರದುರ್ಗ ಆದ ನಾನು ಸಾಂಕ್ರಾಮಿಕ ಕಾಯ್ದೆ–1987 ಮತ್ತು ಕರ್ನಾಟಕ ಕೋವಿಡ್–19 ರೆಗ್ಯೂಲೇಷನ್ ಕಾಯ್ದೆ 2020 ನಿಯಮ 12ರಲ್ಲಿ ಹಾಗೂ ವಿಪತ್ತು ನಿರ್ವಹಣಾ ಕಾಯ್ದೆ–2005ರ ಕಲಂ 30 ಉಪನಿಯಮ (24) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಕೆ.ಪಿ.ಎಂ.ಇ ಕಾಯ್ದೆಯಡಿ ನೊಂದಾವಣೆಯಾಗಿರುವ ಖಾಸಗಿ ಆಸ್ಪತ್ರೆಗಳಲ್ಲಿ ಸಾರ್ವಜನಿಕ ವೈದ್ಯ ಸಂಸ್ಥೆಯಿಂದ ಚಿಕಿತ್ಸೆಗಾಗಿ ಉಲ್ಲೇಖಿಸಲಾಗುವ ಪ್ರಕರಣಗಳಲ್ಲಿನ ಸೋಂಕಿತರ ಚಿಕಿತ್ಸೆಗಾಗಿ ಆಸ್ಪತ್ರೆಗಳ ಒಟ್ಟು ಸಾಮರ್ಥ್ಯದ ಶೇ.50% ರಷ್ಟು ಹಾಸಿಗೆಗಳನ್ನು ಕಡ್ಡಾಯವಾಗಿ ಕಾಯ್ದಿರಿಸಲು ಆದೇಶಿಸಿದೆ.

ಈ ಆದೇಶ ಪಾಲನೆ ಮಾಡದ ಖಾಸಗಿ ಆಸ್ಪತ್ರೆಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ–2005 ಮತ್ತು ಇಂಡಿಯನ್ ಪೀನಲ್ ಕೋಡ್ ಅಡಿ ಶಿಸ್ತು ಕ್ರಮ ಜರುಗಿಸಲಾಗುವುದು.

(ಕವಿತಾ ಎಸ್.ಮನ್ನಿಕೇರಿ)
ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ
ಚಿತ್ರದುರ್ಗ ಜಿಲ್ಲೆ

**ಪ್ರತಿಯನ್ನು ಮಾಹಿತಿ ಮತ್ತು ಕ್ರಮಕ್ಕಾಗಿ:–**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ) ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
3) ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು, ಚಿತ್ರದುರ್ಗ
4) ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ ಇವರಿಗೆ ಮಾಹಿತಿಗಾಗಿ ಹಾಗೂ ಕೋವಿಡ್–19 ಸೋಂಕಿತರನ್ನು ಖಾಸಗಿ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಶಿಫಾರಸ್ಸು ಮಾಡುವ ಬಗ್ಗೆ ದೈನಂದಿನ ವರದಿಗಳನ್ನು ತಪ್ಪದೇ ಈ ಪ್ರಾಧಿಕಾರಕ್ಕೆ ಸಲ್ಲಿಸಲು ಸೂಚಿಸಿದೆ.
5) ಅಧ್ಯಕ್ಷರು, ಭಾರತೀಯ ವೈದ್ಯಕೀಯ ಸಂಸ್ಥೆ, ಜಿಲ್ಲಾ ಶಾಖೆ, ಚಿತ್ರದುರ್ಗ ಇವರಿಗೆ ಮಾಹಿತಿಗಾಗಿ
6) ಕೆ.ಪಿ.ಎಂ.ಇ ಕಾಯ್ದೆ ಅಡಿ ನೊಂದಾವಣೆಗೊಂಡಿರುವ ಖಾಸಗಿ ಆಸ್ಪತ್ರೆಗಳ ಮುಖ್ಯಸ್ಥರುಗಳಿಗೆ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳ ಮುಖಾಂತರ
7) ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ಚಿತ್ರದುರ್ಗ ಇವರಿಗೆ ಜಿಲ್ಲಾ ಶಸ್ತ್ರಚಿಕಿತ್ಸಕರಿಂದ ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸ್ಸು ಆಗುವ ರೋಗಿಗಳಿಗೆ ಹಾಸಿಗೆ ಸೌಲಭ್ಯದ ಬಗ್ಗೆ ದೈನಂದಿನವಾಗಿ ಪರಿಶೀಲಿಸಿ ವರದಿ ಮಾಡಲು ಸೂಚಿಸಿದೆ.
8) ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು